ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) 2006–07ನೇ ಸಾಲಿನಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬಗಳಿಗೆ ಸೇರಿದ 1,75,023 ವಿದ್ಯಾರ್ಥಿನಿಯರಿಗೆ ಬೈಸಿಕಲ್‌ಗಳನ್ನು ವಿತರಿಸಲಾಗಿದೆ

ಆ) ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗೆ ಇರುವ ಕುಟುಂಬಗಳಿಗೆ ಸೇರಿದ ಹೆಣ್ಣು ಮಕ್ಕಳಿಗೆ ಮಾತ್ರ ಬೈಸಿಕಲ್‌ಗಳನ್ನು ವಿತರಿಸಲಾಗಿದೆ

ಇ) ಒಟ್ಟು ರೂ 35,52,96,690–00 (ಮೂವತ್ತೈದು ಕೋಟಿ ಐವತ್ತೆರಡು ಲಕ್ಷ ತೊಂಬತ್ತಾರು ಸಾವಿರದ ಆರು ನೂರ ತೊಂಬತ್ತು ಮಾತ್ರ)

466(44) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) 2006–07ನೇ ಸಾಲಿನಲ್ಲಿ ಮಂಜೂರಾದ ಸರ್ಕಾರಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು, ಜಿಲ್ಲಾವಾರು ಮತ್ತು ತಾಲ್ಲೂಕುವಾರು ಪಟ್ಟಿಯನ್ನು ನೀಡುವುದು,

ಆ) ಡಾ ನಂಜುಂಡಪ್ಪನವರ ವರದಿ ಪ್ರಕಾರ ಅತ್ಯಂತ ಹಿಂದುಳಿದ ತಾಲ್ಲೂಕುಗಳಿಗೆ ಮೊದಲನೆಯ ಆದ್ಯತೆಯನ್ನು ಕೊಟ್ಟು ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆಯೇ, (ತಾಲ್ಲೂಕುವಾರು ವಿವರಗಳನ್ನು ನೀಡುವುದು)

ಇ) 2006–07ನೇ ಸಾಲಿನಲ್ಲಿ ಹೊಸದಾಗಿ ಮಂಜೂರು ಮಾಡಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಉಪನ್ಯಾಸಕರ ಹುದ್ದೆಗಳನ್ನು ಹಾಗೂ ಕಟ್ಟಡಗಳನ್ನು ಮಂಜೂರು ಮಾಡಲಾಗಿದೆಯೇ?

ಶ್ರೀ ಬಸವರಾಜ ಎಸ್ ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು)

ಅ) 2006–07ನೇ ಸಾಲಿನಲ್ಲಿ 485 ಹೊಸ ಸರ್ಕಾರಿ ಪ್ರೌಢಶಾಲೆಗಳನ್ನು ಮಂಜೂರು ಮಾಡಲಾಗಿದೆ (ಪಟ್ಟಿಯನ್ನು ಲಗತ್ತಿಸಿದೆ)

ಆ) ಶೈಕ್ಷಣಿಕ ಅಗತ್ಯತೆಗಳನ್ನು ಗಮನದಲ್ಲಿಟ್ಟುಕೊಂಡು ಮಂಜೂರು ಮಾಡಲಾಗಿದೆ

ಇ) 2006–07ನೇ ಸಾಲಿನಲ್ಲಿ ಹೊಸದಾಗಿ ಮಂಜೂರು ಮಾಡಿರುವ 199 ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ, ಕಾಲೇಜು ಮಂಜೂರಾತಿ ಆದೇಶದೊಂದಿಗೆ ಉಪನ್ಯಾಸಕರ ಹುದ್ದೆಗಳನ್ನು ಸಹ ಮಂಜೂರು ಮಾಡಲಾಗಿದೆ ಸದರಿ ಹುದ್ದೆಗಳನ್ನು ಬಡ್ತಿ ಹಾಗೂ ನೇರ ನೇಮಕಾತಿ ಮೂಲಕ ತುಂಬಲಾಗುತ್ತಿದೆ ತಾತ್ಕಾಲಿಕ ವ್ಯವಸ್ಥೆಯಾಗಿ ನಿವೃತ್ತಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ

2006–07ನೇ ಸಾಲಿನಲ್ಲಿ ಪ್ರಾರಂಭವಾದ 199 ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ 91 ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಕಟ್ಟಡ ನಿರ್ಮಾಣಕ್ಕೆ R I D F XII ಯೋಜನೆಯಲ್ಲಿ ಮಂಜೂರಾತಿ ನೀಡಲಾಗಿದ್ದು, ಕಾಮಗಾರಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗುತ್ತಿದೆ

467(46) ಶ್ರೀ ಬಾದರ್ಲಿ ಹಂಪನಗೌಡ (ಸಿಂಧನೂರು) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಕಳಸಾ ಬಂಡೂರಿ ನಾಲೆ ಯೋಜನೆ ಯಾವ ಹಂತದಲ್ಲಿದೆ ಇದರ ಅಂದಾಜು ವೆಚ್ಚವೆಷ್ಟು,

ಆ) ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ಕಳಸಾನಾಲಾ ತಿರುವು ಯೋಜನೆಯ ಅರಣ್ಯೇತರ ಪ್ರದೇಶದಲ್ಲಿನ ಕೂಡು ಕಾಲುವೆಯ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿದೆ ಬಂಧೂರುನಾಲಾ ತಿರುವು ಯೋಜನೆಗೆ ಸಂಬಂಧಿಸಿದಂತೆ ನಾಲೆಯ ಪಕ್ಕದಲ್ಲಿರುವ "ನೇರ್ಸೆ" ಗ್ರಾಮಸ್ಥರಿಂದ ಸರ್ವೆ ಕಾರ್ಯಕ್ಕೆ ಅಡೆತಡೆ ಇದ್ದುದರಿಂದ, ಪರ್ಯಾಯ ಪಂಕ್ತೀಕರಣಕ್ಕೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯನ್ನು ಪಡೆಯುವ ಕುರಿತು ಕ್ರಮ ಕೈಗೊಳ್ಳಲಾಗುತ್ತಿದೆ

1 ಕಳಸಾ ಅಣೆಕಟ್ಟೆಯ ಅಂದಾಜು ಮೊತ್ತ ರೂ 21 24 ಕೋಟಿಗಳು